# All India Radio: Bangalore
## National Bulletin In Kannada
## 20.03.2026 19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಪಶ್ಚಿಮ ಏಷ್ಯಾ ಸಂಘರ್ಷ: ಮಾತುಕತೆ ಮೂಲಕ ಶಾಂತಿ ಒಪ್ಪಂದಕ್ಕೆ ಬರುವಂತೆ ಭಾರತ ಆಗ್ರಹ
- ದೇಶಿಯ ಎಲ್‌ಪಿಜಿ ಉತ್ಪಾದನೆಯಲ್ಲಿ ಶೇಕಡಾ ೪೦ ರಷ್ಟು ಹೆಚ್ಚಳ - ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಮಾಹಿತಿ
- ಮುನ್ನೂರು ಅಕ್ರಮ ಜೂಜು ವೆಬ್‌ಸೈಟ್‌ಗಳು, ಆಪ್‌ಗಳನ್ನು ನಿರ್ಬಂಧಿಸಿದ ಕೇಂದ್ರ ಸರ್ಕಾರ
- ಓರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್: ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಮಾಳ್ವಿಕಾ ಬನ್ಸೋದ್ - ಇಶಾರಾಣಿ ಬರುವಾ ಮುಖಾಮುಖಿ

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು, ಓಮಾನ್, ಮಲೇಷಿಯಾ, ಫ್ರಾನ್ಸ್, ಜೋರ್ಡಾನ್ ಮತ್ತು ಕತಾರ್ ನಾಯಕರೊಂದಿಗೆ ಮಾತುಕತೆ ನಡೆಸಿದ್ದು, ಪಶ್ಚಿಮ ಏಷ್ಯಾ ಸಂಘರ್ಷದ ಬಗ್ಗೆ ಭಾರತದ ನಿಲುವನ್ನು ಪುನರುಚ್ಚರಿಸಿದ್ದಾರೆ. ಮಾತುಕತೆ ಮೂಲಕ ಶಾಂತಿ ಒಪ್ಪಂದಕ್ಕೆ ಬರುವಂತೆ ಪ್ರಧಾನಿ ಆಗ್ರಹಿಸಿದ್ದಾರೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ರಣಧೀರ್ ಜೈಸ್ವಾಲ್, ಹರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಸಂಚಾರ ಮತ್ತು ನಿರಂತರ ಸಮನ್ವಯಕ್ಕಾಗಿ ಈ ಎಲ್ಲಾ ದೇಶಗಳ ಬೆಂಬಲವನ್ನು ಪ್ರಧಾನಿ ಕೋರಿದ್ದಾರೆ. ಇದೇ ವೇಳೆ, ಅರ್ಮೇನಿಯಾ-ಅಜರ್‌ಬೈಜಾನ್ ಮಾರ್ಗದ ಮೂಲಕ ೬೧೩ ಭಾರತೀಯ ಪ್ರಜೆಗಳನ್ನು ಸ್ವದೇಶಕ್ಕೆ ಮರಳಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

<>><><*><><<>

ಎಲ್ಲಾ ಸಂಸ್ಕರಣಾಗಾರಗಳು ಸಾಕಷ್ಟು ಕಚ್ಚಾ ತೈಲ ದಾಸ್ತಾನುಗಳೊಂದಿಗೆ ಹೆಚ್ಚಿನ ಸಾಮರ್ಥ್ಯದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ದೇಶೀಯ ಎಲ್‌ಪಿಜಿ ಉತ್ಪಾದನೆ ಸ್ಥಿರವಾಗಿದೆ ಮತ್ತು ಸಾಕಷ್ಟು ಸಂಗ್ರಹ ಲಭ್ಯವಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತು ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ

ಸಚಿವಾಲಯದ ಜಂಟಿ ಕರ್ಯದರ್ಶಿ ಸುಜಾತಾ ಶರ್ಮಾ, ಕಳೆದ ಒಂದು ವಾರದಲ್ಲಿ ಗ್ರಾಹಕರಿಗೆ ೧೧ ಸಾವಿರದ ೩೦೦ ಟನ್ ವಾಣಿಜ್ಯ ಎಲ್‌ಪಿಜಿ ಯನ್ನು ಪೂರೈಸಲಾಗಿದೆ. ದೇಶಿಯ ಎಲ್‌ಪಿಜಿ ಉತ್ಪಾದನೆಯು, ಶೇಕಡಾ ೪೦ ರಷ್ಟು ಹೆಚ್ಚಾಗಿದೆ ಎಂದು ತಿಳಿಸಿದರು. ಆನ್‌ಲೈನ್‌ನಲ್ಲಿ ಎಲ್‌ಪಿಜಿ ಸಿಲೆಂಡರ್‌ಗಳ ಬುಕ್ಕಿಂಗ್ ಶೇಕಡಾ ೯೩ಕ್ಕೆ ಏರಿಕೆಯಾಗಿದೆ. ಇದೇ ವೇಳೆ, ಅತಂಕದಿಂದ ಎಲ್‌ಪಿಜಿ ಸಿಲಿಂಡರ್‌ಗಳ ಬುಕ್ಕಿಂಗ್ ಮಾಡುವ ಗ್ರಾಹಕರ ಸಂಖ್ಯೆ ತಗ್ಗಿದೆ ಎಂದು ಅವರು ಹೇಳಿದರು. ಅಕ್ರಮ ಸಿಲಿಂಡರ್‌ಗಳನ್ನು ದಾಸ್ತಾನು ಮಾಡಿದ್ದ ಆರೋಪಕ್ಕೆ ಸಂಬಂಧಿಸಿದಂತೆ ದೇಶಾದ್ಯಂತ ನಿನ್ನೆ ನಾಲ್ಕು ಸಾವಿರದ ೫೦೦ ಕಡೆಗಳಲ್ಲಿ ದಾಳಿ ನಡೆಸಲಾಗಿದೆ ಎಂದು ಸುಜಾತಾ ಶರ್ಮಾ ಮಾಹಿತಿ ನೀಡಿದರು.

ಹಡಗು ಮತ್ತು ಜಲಮಾರ್ಗಗಳ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿನ್ಹಾ ಮಾತನಾಡಿ, ಮಧ್ಯಪ್ರಾಚ್ಯ ಪ್ರದೇಶದಲ್ಲಿ ಭಾರತೀಯ ಎಲ್ಲಾ ೨೨ ಹಡಗುಗಳು ಮತ್ತು ೬೧೧ ಭಾರತೀಯ ನಾವಿಕರು ಸುರಕ್ಷಿತವಾಗಿದ್ದಾರೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಕಚ್ಚಾ ತೈಲ ಮತ್ತು ಎಲ್‌ಪಿಜಿ ನಿರ್ವಹಣೆಗೆ ನವಮಂಗಳೂರು ಬಂದರು, ಶುಲ್ಕದಲ್ಲಿ ರಿಯಾಯಿತಿ ಘೋಷಿಸಿದೆ ಎಂದು ಮಾಹಿತಿ ನೀಡಿದರು.

<>><><*><><<>

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ನವದೆಹಲಿಯಲ್ಲಿಂದು ಹಿರಿಯ ಅಧಿಕಾರಿಗಳೊಂದಿಗೆ ದೇಶದ ಕೃಷಿ ಪರಿಸ್ಥಿತಿಯನ್ನು ಪರಿಶೀಲಿಸಿದರು. ಹಲವಾರು ರಾಜ್ಯಗಳಲ್ಲಿ ಅಕಾಲಿಕ ಮಳೆ ಮತ್ತು ಆಲಿಕಲ್ಲು ಮಳೆಯಿಂದಾಗಿ ಹಾನಿಗೊಳಗಾದ ಬೆಳೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ರೈತರಿಗೆ ಸಾಧ್ಯವಾದಷ್ಟು ಪರಿಹಾರ ಸಿಗುವಂತೆ ನೋಡಿಕೊಳ್ಳಲು ತಕ್ಷಣದ ಸಮೀಕ್ಷೆಗಳು ಮತ್ತು ಅಗತ್ಯ ಕ್ರಮಗಳಿಗೆ ಸೂಚನೆ ನೀಡಲಾಗಿದೆ. ರೈತರು ತಮ್ಮ ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ಪಡೆಯಲು ಸಾಧ್ಯವಾಗುವಂತೆ ಕನಿಷ್ಠ ಬೆಂಬಲ ಬೆಲೆಯಲ್ಲಿ ಸುಗಮ ದಾಸ್ತಾನು ಸಂಗ್ರಹ ಖಚಿತಪಡಿಸಿಕೊಳ್ಳಲು ಅಗತ್ಯ ಸೂಚನೆ ನೀಡಲಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಮುಂಬರುವ ಮುಂಗಾರು ಋತುವಿನಲ್ಲಿ ದೇಶದ ವಿವಿಧ ಪ್ರದೇಶಗಳಲ್ಲಿ ಪ್ರಾದೇಶಿಕ ಕೃಷಿ ಸಮ್ಮೇಳನಗಳನ್ನು ಆಯೋಜಿಸಲು ನಿರ್ಧರಿಸಲಾಗಿದೆ. ಇದರಿಂದಾಗಿ ಸ್ಥಳೀಯ ಅಗತ್ಯಗಳಿಗೆ ಅನುಗಣವಾಗಿ ಮುಂಗಾರು ಬೆಳೆಗೆ ಉತ್ತಮ ಕಾರ್ಯತಂತ್ರಗಳನ್ನು ರೂಪಿಸಬಹುದು ಎಂದು ಅವರು ಮಾಹಿತಿ ನೀಡಿದ್ದಾರೆ.

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ನಾಳೆಯಿಂದ ಎರಡು ದಿನಗಳ ಕಾಲ ಮಹಾರಾಷ್ಟ್ರ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಮೊದಲ ದಿನದಂದು ಅವರು, ನಾಗ್ಪುರದ ಮಹರ್ಷಿ ವ್ಯಾಸ್ ಸಭಾಂಗಣದಲ್ಲಿ ಭಾರತೀಯ ಯುವ ಸಂಸತ್ತಿನ ೨೯ನೇ ರಾಷ್ಟ್ರೀಯ ಅಧಿವೇಶನದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಂತರ ಅವರು, ರತನ್ ಟಾಟಾ ಮಹಾರಾಷ್ಟ್ರ ರಾಜ್ಯ ಕೌಶಲ್ಯ ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವ ಸಮಾರಂಭ ಮತ್ತು ಮುಂಬೈನಲ್ಲಿ ೬೪ನೇ ಜೈನ ದೀಕ್ಷಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಭೇಟಿಯ ಎರಡನೇ ದಿನದಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಮಹಾರಾಷ್ಟ್ರದ ಪುಣೆಯಲ್ಲಿರುವ ನಿಸರ್ಗೋಪಚಾರ್ ಆಶ್ರಮದ ಸಂಸ್ಥಾಪನಾ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ.

<>><><*><><<>

ಕ್ಯಾಮರೂನ್‌ನ ಯೌಂಡೆಯಲ್ಲಿ ಇದೇ ೨೬ ರಿಂದ ೨೯ ರವರೆಗೆ ನಡೆಯಲಿರುವ ವಿಶ್ವ ವ್ಯಾಪಾರ ಸಂಸ್ಥೆ- ಡಬ್ಲ್ಯು.ಟಿ.ಒ ೧೪ನೇ ಸಚಿವ ಸಮ್ಮೇಳನದಲ್ಲಿ ಭಾರತದ ನಿಯೋಗದ ನೇತೃತ್ವವನ್ನು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ವಹಿಸಲಿದ್ದಾರೆ. ವಿವಿಧ ಭೌಗೋಳಿಕ ರಾಜಕೀಯ ಕಾರಣಗಳಿಂದಾಗಿ ಜಗತ್ತು ಪ್ರಕ್ಷುಬ್ಧತೆಯನ್ನು ಎದುರಿಸುತ್ತಿರುವ ನಡುವೆ ಜಾಗತಿಕ ವ್ಯಾಪಾರವನ್ನು ಉತ್ತೇಜಿಸುವಲ್ಲಿ ಪ್ರಮುಖ ಪಾತ್ರ ವಹಿಸಲು ಡಬ್ಲ್ಯು.ಟಿ.ಒ ಅನ್ನು ಮತ್ತಷ್ಟು ಬಲಪಡಿಸಲು ಭಾರತ ಒತ್ತಾಯಿಸುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಇ-ಕಾಮರ್ಸ್ ಪ್ರಸರಣದ ಮೇಲಿನ ೨೮ ವರ್ಷಗಳ ನಿಷೇಧ ಮುಂದುವರಿಕೆ, ಮೀನುಗಾರಿಕೆ ಸಬ್ಸಿಡಿಗಳು ಮತ್ತು ಅಭಿವೃದ್ಧಿಗಾಗಿ ಹೂಡಿಕೆ ಸೌಲಭ್ಯ ಒಪ್ಪಂದದ ಪ್ರಸ್ತಾಪ ಸೇರಿದಂತೆ ಇತರ ವಿಷಯಗಳನ್ನು ಭಾರತ ಪ್ರಸ್ತಾಪಿಸಲಿದೆ ಎಂದು ಸಚಿವಾಲಯ ತಿಳಿಸಿದೆ.

<>><><*><><<>

ಕಾನೂನುಬಾಹಿರ ಆನ್‌ಲೈನ್ ಗೇಮಿಂಗ್ ಚಟುವಟಿಕೆಗಳ ವಿರುದ್ಧ ನಿರಂತರ ಕ್ರಮದ ಭಾಗವಾಗಿ ಕೇಂದ್ರ ಸರ್ಕಾರ, ೩೦೦ ಅಕ್ರಮ ಜೂಜು ಮತ್ತು ಬೆಟ್ಟಿಂಗ್ ವೆಬ್‌ಸೈಟ್‌ಗಳು ಹಾಗೂ ಅಪ್ಲಿಕೇಶನ್‌ಗಳನ್ನು ನಿರ್ಬಂಧಿಸಿದೆ. ಆನ್‌ಲೈನ್ ಕ್ರೀಡಾ ಬೆಟ್ಟಿಂಗ್ ವೆಬ್‌ಸೈಟ್‌ಗಳು, ಸ್ಲಾಟ್‌ಗಳನ್ನು ನೀಡುವ ಆನ್‌ಲೈನ್ ಕ್ಯಾಸಿನೊಗಳು, ರಿಯಲ್-ಮನಿ ಕಾರ್ಡ್, ಕ್ಯಾಸಿನೊ ಗೇಮಿಂಗ್ ಆಪ್‌ಗಳನ್ನು ಮತ್ತು ಬೆಟ್ಟಿಂಗ್ ವಿನಿಮಯ ಕೇಂದ್ರಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಮಟ್ಕಾ ಜೂಜಿನ ಜಾಲಗಳ ವಿರುದ್ಧವೂ ಕ್ರಮ ಕೈಗೊಳ್ಳಲಾಗಿದೆ. ಇಲ್ಲಿಯವರೆಗೆ ಅಂತಹ ಒಟ್ಟು ಸುಮಾರು ೮

ಸಾವಿರದ ೪೦೦ ವೆಬ್‌ಸೈಟ್‌ಗಳನ್ನು ನಿರ್ಬಂಧಿಸಲಾಗಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಮೂಲಗಳು ತಿಳಿಸಿವೆ.

<>><><*><><<>

ಎಲೆಕ್ಟ್ರಾನಿಕ್ ಮತ್ತು ಡಿಜಿಟಲ್ ಮಾಧ್ಯಮಗಳಲ್ಲಿ ರಾಜಕೀಯ ಜಾಹೀರಾತುಗಳನ್ನು ನಿಯಂತ್ರಿಸಲು ಚುನಾವಣಾ ಆಯೋಗ ಆದೇಶ ಹೊರಡಿಸಿದೆ. ಎಲ್ಲಾ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು ಮತ್ತು ವ್ಯಕ್ತಿಗಳು ಅಥವಾ ಸಂಸ್ಥೆಗಳು ಸಹ ತಮ್ಮ ಜಾಹೀರಾತುಗಳನ್ನು ಪ್ರಕಟಿಸುವ ಮೊದಲು ಆಯೋಗದಿಂದ ಅನುಮೋದನೆ ಪಡೆಯಬೇಕು. ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿಯಿಂದ ಅನುಮೋದನೆ ಪಡೆಯಬೇಕು ಎಂದು ಚುನಾವಣಾ ಆಯೋಗ ಸೂಚಿಸಿದೆ.

<>><><*><><<>

ಗುಬ್ಬಚ್ಚಿಗಳ ಸಂಖ್ಯೆಯಲ್ಲಿನ ತ್ವರಿತ ಕುಸಿತದ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇಂದು ವಿಶ್ವದಾದ್ಯಂತ ವಿಶ್ವ ಗುಬ್ಬಚ್ಚಿ ದಿನ ಆಚರಿಸಲಾಗುತ್ತಿದೆ. ಇಕೋ-ಸಿಸ್ ಆಕ್ಷನ್ ಫೌಂಡೇಶನ್‌ನ ಸಹಯೋಗದೊಂದಿಗೆ ೨೦೧೦ ರಲ್ಲಿ 'ನೇಚರ್ ಫಾರೆವರ್ ಸೊಸೈಟಿ ಆಫ್ ಇಂಡಿಯಾ' ಪ್ರಾರಂಭಿಸಿದ ಈ ದಿನ, ಸಣ್ಣ ಪಕ್ಷಿಗಳು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಪ್ರತಿಬಿಂಬಿಸುತ್ತದೆ. ಮನೆಗಳು ಮತ್ತು ನೆರೆಹೊರೆಗಳಲ್ಲಿ ಪರಿಚಿತ ದೃಶ್ಯವಾಗಿದ್ದ ಗುಬ್ಬಚ್ಚಿಗಳ ಸಂಖ್ಯೆಯು ನಗರೀಕರಣ, ಮಾಲಿನ್ಯ, ಗೂಡುಕಟ್ಟುವ ಸ್ಥಳಗಳ ನಷ್ಟ ಮತ್ತು ಬದಲಾಗುತ್ತಿರುವ ಜೀವನಶೈಲಿಯಿಂದಾಗಿ ತೀವ್ರ ಕುಸಿತ ಕಂಡಿದೆ. ಗುಬ್ಬಚ್ಚಿಗಳು ಪರಿಸರ ಸಮತೋಲನವನ್ನು ಕಾಪಾಡಿಕೊಳ್ಳುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತವೆ. ಅವು ಕೀಟಗಳ ಸಂಖ್ಯೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತವೆ ಮತ್ತು ಪರಾಗಸ್ಪರ್ಶಕ್ಕೆ ಕೊಡುಗೆ ನೀಡುತ್ತವೆ. ಇದು ಆರೋಗ್ಯಕರ ನಗರ ಪರಿಸರ ವ್ಯವಸ್ಥೆಗೆ ಪ್ರಮುಖವಾಗಿದೆ. ವಿಶ್ವದಾದ್ಯಂತ ಸಂರಕ್ಷಣಾ ಪ್ರಯತ್ನಗಳನ್ನು ಉತ್ತೇಜಿಸಲು ಜಾಗೃತಿ ಅಭಿಯಾನಗಳು, ಕಲಾ ಸ್ಪರ್ಧೆಗಳು ಮತ್ತು ಸಮುದಾಯ ಉಪಕ್ರಮಗಳಂತಹ ವಿವಿಧ ಚಟುವಟಿಕೆಗಳನ್ನು ಆಯೋಜಿಸಲಾಗುತ್ತಿದೆ. ಸ್ಥಳೀಯ ಸಸ್ಯವರ್ಗವನ್ನು ನೆಡುವುದು ಮತ್ತು ಕೀಟನಾಶಕ ಬಳಕೆಯನ್ನು ಕಡಿಮೆ ಮಾಡುವಂತಹ ಸರಳ ಕ್ರಮಗಳು ಅನುಸರಿಸುವುದರಿಂದ ಗುಬ್ಬಚ್ಚಿಗಳನ್ನು ರಕ್ಷಿಸುವಲ್ಲಿ ಸಹಾಯಕವಾಗಲಿದೆ. ಗುಬ್ಬಚ್ಚಿಗಳು ಕೇವಲ ಪಕ್ಷಿಗಳಲ್ಲ. ಅವು ಪರಿಸರದ ಆರೋಗ್ಯಕರ ಸೂಚಕಗಳಾಗಿವೆ.

<>><><*><><<>

ಫ್ರಾನ್ಸ್ ರಾಜಧಾನಿ ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಓರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಅರ್ಜುನ್ ರಾಮಚಂದ್ರನ್ ಮತ್ತು ಹರಿಹರನ್ ಜೋಡಿ, ಇಂಡೋನೇಷ್ಯಾದ ಭಾಗಸ್ ಮೌಲಾನಾ ಮತ್ತು ಲಿಯೋ ಕಾರ್ನಾಂಡೊ ಜೋಡಿ ವಿರುದ್ಧ ೧೨-೨೧, ೨೦-೨೨ ಅಂತರದಲ್ಲಿ ಪರಾಭವಗೊಂಡಿದೆ. ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತದ ತನ್ವಿ ಶರ್ಮಾ ಮತ್ತು ಜಪಾನ್ ನಟ್ಸುಕಿ-ನಿದೈರಾ ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

ಇದೇ ವೇಳೆ, ಇಂದು ನಡೆಯಲಿರುವ ಮತ್ತೊಂದು ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ, ಮಾಳ್ವಿಕಾ ಬನ್ಸೋಡ್,  ಇಶಾರಾಣಿ ಬರುವಾ ಅವರನ್ನು ಎದುರಿಸಲಿದ್ದಾರೆ.

<>><><*><><<>

ಅರುಣಾಚಲಪ್ರದೇಶದ ಯೂಪಿಯಾದಲ್ಲಿರುವ ಹೊರಾಂಗಣ ಕ್ರೀಡಾಂಗಣದಲ್ಲಿ ಇದೇ ೨೫ರಂದು ನಡೆಯಲಿರುವ ೨೩ ವರ್ಷದೊಳಗಿನವರ ತ್ರಿ-ರಾಷ್ಟ್ರ ಚಾಂಪಿಯನ್‌ಶಿಪ್ ಫುಟ್ಬಾಲ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭದಲ್ಲಿ ಭಾರತದ ಫುಟ್ಬಾಲ್ ತಾರೆ ಸುನೀಲ್ ಛಟ್ರಿ ಪಾಲ್ಗೊಳ್ಳಲಿದ್ದಾರೆ. ಈ ಹಿನ್ನೆಲೆಯಲ್ಲಿ ಅವರು ಅರುಣಾಚಲಪ್ರದೇಶಕ್ಕೆ ಮೊದಲ ಭಾರಿ ಭೇಟಿ ನೀಡುತ್ತಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>